ಆ) ಕೇಂದ್ರ ಸರ್ಕಾರವು ಸಲಹೆ ಮಾಡಿರುವಂತೆ ಈ ಪ್ರಸ್ತಾವನೆಗೆ ಉಚ್ಚ ನ್ಯಾಯಾಲಯದ ಸಹಮತಿಯನ್ನು ಕೋರಲಾಗಿದೆ. ಉಚ್ಚ ನ್ಯಾಯಾಲಯವು ಸದರಿ ವಿಷಯವನ್ನು ಉಚ್ಚ ನ್ಯಾಯಾಲಯದ ಪೂರ್ಣ ಪೀಠದ ಮುಂದಿರಿಸಿ ನಿರ್ಣಯವನ್ನು ಸರ್ಕಾರಕ್ಕೆ ತಿಳಿಸುವುದಾಗಿ ತಿಳಿಸಿರುತ್ತಾರೆ. ಪೂರ್ಣ ಪೀಠದ ನಿರ್ಣಯವನ್ನು ಎದುರು ನೋಡಲಾಗುತ್ತಿದೆ.

ಇ) ಇಲ್ಲ

ಈ) ಇಲ್ಲ

ಉ) ಇಲ್ಲ

ಊ) ಈ ವಿಷಯದಲ್ಲಿ ಉಚ್ಚ ನ್ಯಾಯಾಲಯದ ಪೂರ್ಣ ಪೀಠದ ನಿರ್ಣಯವನ್ನು ಎದುರು ನೋಡಲಾಗುತ್ತಿರುವುದರಿಂದ ಇಂತಿಷ್ಟೇ ಸಮಯದಲ್ಲಿ ಪೀಠವನ್ನು ಸ್ಥಾಪಿಸಲಾಗುವುದೆಂದು ಹೇಳಲು ಸಾಧ್ಯವಿಲ್ಲ.

ಬೈಲಹೊಂಗಲ ಕೆ.ಎಸ್.ಆರ್.ಟಿ.ಸಿ. ಬಸ್ಸಿಲ್ಡಾಣದಲ್ಲಿ ಮೂತ್ರಾಲಯ ಹಾಗೂ ಶೌಚಾಲಯಗಳನ್ನು ಕಟ್ಟಿಸುವ ಬಗ್ಗೆ

138 - ಶ್ರೀ ಶಿವಾನಂದ ಫಕೀರ್ಪ್ಪ ಕೌಜಲಗಿ (ಬೈಲಹೊಂಗಲ) : ಮಾನ್ಯ ಪರಿಸರ ಮತ್ತು ಜೀವಿಶಾಸ್ತ್ರವಿಜ್ಞಾನ ಮತ್ತು ಯಂತ್ರಕಲೆ ಹಾಗೂ ಮಲೆನಾಡು ಪ್ರದೇಶ ಅಭಿವೃದ್ಧಿ ರಾಜ್ಯಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಕೆ.ಎಸ್.ಆರ್.ಟಿ.ಸಿ. ಬಸ್ ಸ್ಟ್ಯಾಂಡಿನಲ್ಲಿ ಮೂತ್ರಾಲಯ ಹಾಗೂ ಶೌಚಾಲಯಗಳನ್ನು ಹೊಸದಾಗಿ ಕಟ್ಟಿದ್ದೆ ಇದ್ದುದರಿಂದ ಈಗಿರುವ ಅಲ್ಲಿಯ ಮೂತ್ರಾಲಯ ಹಾಗೂ ಶೌಚಾಲಯಗಳಿಂದ ಹರಿವ ದೂಷಿತವಾಗುತ್ತಿದ್ದು, ಜನರಿಗೆ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಡಿವಿಜನಲ್ ಕಂಟ್ರೋಲರ್, ಕೆ.ಎಸ್.ಆರ್.ಟಿ.ಸಿ. ಬೆಳಗಾಂ ಇವರು ಎಂ.ಡಿ. ಕೆ.ಎಸ್.ಆರ್.ಟಿ.ಸಿ. ಬೆಂಗಳೂರು ಇವರಿಗೆ ಅಲ್ಲಿ ಹೊಸದಾಗಿ ಮೂತ್ರಾಲಯ ಹಾಗೂ ಶೌಚಾಲಯಗಳನ್ನು ಕಟ್ಟಬೇಕೆಂದು ಜಿಂದಾಜು ಪತ್ರಗಳನ್ನು ತಯಾರಿಸಿ ಕಳುಹಿಸಿದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ಅಲ್ಲಿ ಹರಿವ ದೂಷಿತವಾಗುತ್ತಿದ್ದರೂ ಪರಿಸರ ಇಲಾಖೆಯ ಅಧಿಕಾರಿಗಳು ಕೆ.ಎಸ್.ಆರ್.ಟಿ.ಸಿ.ಯ ಎಂ.ಡಿ. ಹಾಗೂ ಡಿವಿಜನಲ್ ಕಂಟ್ರೋಲರ್ ಕೆ.ಎಸ್.ಆರ್.ಟಿ.ಸಿ. ಬೆಳಗಾಂ ಇವರ ಮೇಲೆ ಯಾವುದೇ ಕ್ರಮ ಕೈಗೊಳ್ಳದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಈ) *ಹಾಗಿದ್ದಲ್ಲಿ ಕ್ರಮ ಕೈಗೊಳ್ಳದೇ ಇರಲು ಕಾರಣವೇನು?*

ಉ) *ಹರಿವ ದೂಷಿತವಾಗದಂತೆ ತಡೆಗಟ್ಟಲು ಅಲ್ಲಿ ಹೊಸದಾಗಿ ಮೂತ್ರಾಲಯ ಹಾಗೂ ಶೌಚಾಲಯಗಳನ್ನು ಕಟ್ಟಲು ಪರಿಸರ ಇಲಾಖೆಯ ಕಾರ್ಯದರ್ಶಿಗಳು ಕೆ.ಎಸ್.ಆರ್.ಟಿ.ಸಿ. ಯವರಿಗೆ ಸೂಕ್ತ ಆದೇಶ ನೀಡುವರೆ?*

ಶ್ರೀ ಎನ್. ಜಿ. ಹಾಲಪ್ಪ (ಪರಿಸರ ಮತ್ತು ಜೀವಿಶಾಸ್ತ್ರ ವಿಜ್ಞಾನ ಯಂತ್ರಕಲೆ ಹಾಗೂ ಮಲೆನಾಡು ಪ್ರದೇಶ ಅಭಿವೃದ್ಧಿ ರಾಜ್ಯ ಸಚಿವರು):

ಅ) ಬಂದಿದೆ.

ಆ) ಬಂದಿದೆ.

ಇ) ಈ ಬಗ್ಗೆ ಈಗಾಗಲೇ ಕ್ರಮ ಜರುಗಿಸಲಾಗಿದ್ದು ಸಂಬಂಧಪಟ್ಟ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳಿಗೆ ಪರಿಸರ ನಿಯಮಾವಳಿಯಲ್ಲಿ ನೋಟೀಸ್

ನೀಡಲಾಗಿದೆ. ಅಲ್ಲದೆ ಸಂಬಂಧಪಟ್ಟ ಪುರಸಭಾ ಅಧಿಕಾರಿಗಳಿಗೆ ಕೂಡ ನೋಟೀಸ್ ನೀಡಲಾಗಿದೆ.

ಈ) ಮೇಲೆ ಸೂಚಿಸಿದಂತೆ ಕ್ರಮ ಜರುಗಿಸಲಾಗಿದೆ.

ಉ) ಈ ಬಗ್ಗೆ ಈಗಾಗಲೇ ನೀಡಲಾದ ನೋಟೀಸ್ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯವರು ಹೊಸದಾಗಿ ಶೌಚಾಲಯ ಕಟ್ಟುವ ಬಗ್ಗೆ ಪ್ರಸ್ತಾವನೆಯನ್ನು ಪರಿಶೀಲಿಸುತ್ತಿದ್ದು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಿಂದ ತಿಳಿದುಬಂದಂತೆ 94-95ನೇ ಸಾಲಿನಲ್ಲಿ ಈ ಕಾರ್ಯವನ್ನು ಕೈಗೊಳ್ಳಲಾಗುವುದು. ನಿಗಧಿತ ಕಾಲಾವಧಿಯಲ್ಲಿ ಈ ಕಾರ್ಯವನ್ನು ಪೂರ್ಣಗೊಳಿಸದಿದ್ದಲ್ಲಿ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು.

ಬೈಲಹೊಂಗಲ ತಾಲ್ಲೂಕಿನ ಹೊಸೂರು ಗ್ರಾಮದಲ್ಲಿ ಆಟದ ಮೈದಾನದ ಕೆಲಸ ಪೂರ್ಣಗೊಳಿಸುವ ಬಗ್ಗೆ

139 - ಶ್ರೀ ಶಿವಾನಂದ ಪೆಟ್. ಕೌಜಲಗಿ (ಬೈಲಹೊಂಗಲ): ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಹೊಸೂರು ಗ್ರಾಮದಲ್ಲಿ ಭೂಸೇನಾ ನಿಗಮದವರು ಪೈಸ್ಕೂಲ್ ಹತ್ತಿರ ಆಟದ ಮೈದಾನ ಮಾಡಲು ಎಷ್ಟು ಹಣವನ್ನು ಖರ್ಚು ಮಾಡಿರುವುದು?*

ಆ) *ಆಟದ ಮೈದಾನವನ್ನು ಪೂರ್ಣಗೊಳಿಸಲು ಇನ್ನು ಎಷ್ಟು ಹಣ ಬೇಕಾಗಿದೆ ಹಾಗೂ ಅದನ್ನು ಯಾವಾಗ ಪೂರ್ಣಗೊಳಿಸಲಾಗುವುದು?*

ಶ್ರೀ ಪೆಟ್.ವಿಶ್ವನಾಥ್ (ಕನ್ನಡ ಮತ್ತು ಸಂಸ್ಕೃತಿ ಯುವಜನ ಸೇವಾ ಸಚಿವರು):

ಅ) ಈ ಆಟದ ಬಯಲನ್ನು ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯು ಅಭಿವೃದ್ಧಿ ಪಡಿಸುತ್ತಿರುವುದಿಲ್ಲ. ಆದುದರಿಂದ ಮಾಹಿತಿ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೋತ್ತರಗಳನ್ನು ಸಭೆಯ ಮುಂದೆ ಮಂಡಿಸಲಾಯಿತು.

ಪ್ರಕಟಣೆ

ಅಧ್ಯಕ್ಷರು : ವಿಧಾನ ಪರಿಷತ್ತಿನ ಸಭಾಪತಿಯವರಿಂದ ಈ ಕೆಳಕಂಡ ಸಂದೇಶ ಬಂದಿದೆ. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ ೧೧೪ರ ಮೇರೆಗೆ ವಿಧಾನ ಸಭೆಯಿಂದ ಅಂಗೀಕಾರವಾದ 1994ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಕರ್ನಾಟಕ ವಿಧಾನ ಪರಿಷತ್ತಿನಲ್ಲಿ ದಿನಾಂಕ 14-2-94 ರಂದು ಅನುಮೋದಿಸಲಾಗಿದೆ ಎಂದು ತಿಳಿಸುತ್ತೇನೆ.

ಪ್ರಸ್ತಾವನೆ

ಶ್ರೀ ಭೀಮಣ್ಣ ಖಂಡ್ರೆ (ಸಾರಿಗೆ ಸಚಿವರು) : ಮಾನ್ಯ ಅಧ್ಯಕ್ಷರೆ, ತಮ್ಮ ಅಪ್ಪಣೆ ಪಡೆದು ಒಂದು ಪ್ರಸ್ತಾವನೆಯನ್ನು ಸಭೆ ಮುಂದೆ ಮಂಡಿಸುತ್ತೇನೆ. "ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಪ್ರಯಾಣ ದರವನ್ನು ಮತ್ತು ಸಂಸ್ಥೆಯ ಕಾರ್ಯ ನಿರ್ವಹಣೆ ಮತ್ತು ಆಡಳಿತ ದಕ್ಷತೆಯನ್ನು ಉತ್ತಮಪಡಿಸುವ ಸಲುವಾಗಿ ಸರಕಾರಕ್ಕೆ ಸೂಕ್ತ ಶಿಫಾರಸ್ಸುಗಳನ್ನು ನೀಡಲು ರಚಿಸಲಾಗಿರುವ ವಿಧಾನ ಮಂಡಲದ ಜಂಟಿ